ವಿಷಯ:-ರಾಜ್ಯದ ಎಲ್ಲಾ ಜಿಲ್ಲಾ ಕಾರ್ಮಿಕ ನ್ಯಾಯಾಲಯದ ಅಧ್ಯಕ್ಷರಿಗೆ ವಾಹನ ಸೌಲಭ್ಯ ಒದಗಿಸುವ ಕುರಿತು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 72(297)

ಶ್ರೀಮತಿ ಸುಮ ವಸಂತ(ವೀರಾಜಪೇಟೆ)

ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳ ಕಾರ್ಮಿಕ ನ್ಯಾಯಾಲಯದ ಅಧ್ಯಕ್ಷಾಧಿಕಾರಿಯವರಿಗೆ ಮತ್ತು ನ್ಯಾಯಾಧೀಶರುಗಳಿಗೆ ವಾಹನ ಸೌಲಭ್ಯವಿದೆಯೇ;

ಆ) ಇಲ್ಲದಿದ್ದಲ್ಲಿ ಎಲ್ಲಾ ಜಿಲ್ಲೆಗಳಿಗೂ ವಾಹನ ಒದಗಿಸಲು ಆಲೋಚನೆ ಸರ್ಕಾರಕ್ಕೆ ಇದೆಯೇ;

ಇ) ಹಾಗಿದ್ದಲ್ಲಿ, ವಾಹನ ಸೌಕರ್ಯ ಒದಗಿಸಲು ಇನ್ನು ಎಷ್ಟು ಸಮಯ ಬೇಕಾಗಬಹುದು;

ಈ) ವಾಹನ ಸೌಕರ್ಯವಿಲ್ಲದೆ ಅರ್ಜಿಗಳು ವಿಲೇವಾರಿಯಾಗಲು ತುಂಬಾ ವಿಳಂಬವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಶ್ರೀ ಬ್ಲೇಸಿಯಸ್ ಎಂ.ಡಿಸೋಜ

(ಕಾರ್ಮಿಕ ಸಚಿವರು)

ಇಲ್ಲ

ಹೌದು

ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ ಅಧ್ಯಕ್ಷಾಧಿಕಾರಿಗಳಿಗೆ ವಾಹನಗಳನ್ನು ಆದಷ್ಟು ಬೇಗ ಒದಗಿಸಲಾಗುವುದು.

ಇಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಧರ್ಮಸಿಂಗ್(ಸಮಾಜ ಕಲ್ಯಾಣ ಸಚಿವರು):- ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ4ನೇ ಪಟ್ಟಿಯಲ್ಲಿರುವ 42 ಪ್ರಶ್ನೆಗಳ ಪೈಕಿ 149, 378, 323, 361 ಮತ್ತು 329 ಪ್ರಶ್ನೆಗಳನ್ನು ಹೊರತುಪಡಿಸಿ ಉಳಿದ 32 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ವಿಷಯ:- ಅಂಗನವಾಡಿ ಕೇಂದ್ರಗಳನ್ನು ಖಾಸಗೀಯವರಿಗೆ ವಹಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ 137(219)

ಶ್ರೀ ಆರ್.ದಯಾನಂದರಾವ್

ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಖಾಸಗಿಯವರಿಗೆ ವಹಿಸಲು ಕೇಂದ್ರ ಸರ್ಕಾರ ರಾಜ್ಯಕ್ಕೆ ನಿರ್ದೇಶನ ನೀಡಿರುವುದೇ?

ಶ್ರೀ ಧರ್ಮಸಿಂಗ್

(ಸಮಾಜ ಕಲ್ಯಾಣ ಸಚಿವರು)

1993ನೇ ಸಾಲಿನಲ್ಲಿ ರಾಜ್ಯಕ್ಕೆ ಮಂಜೂರು ಮಾಡಿರುವ 19 ಹೊಸ ಐಸಿಡಿಎಸ್ ಯೋಜನೆಗಳಲ್ಲಿ 2 ಯೋಜನೆಗಳನ್ನು ಸ್ವಯಂ ಸೇವಾ ಸಂಸ್ಥೆಗಳಿಂದ ಕಾರ್ಯಗತಗೊಳಿಸಲು ಸೂಚಿಸಿದೆ.

ವಿಷಯ : - ಬೆಂಗಳೂರು ಮಹಾನಗರ ಪಾಲಿಕೆಯ ಶಾಲೆಗಳಲ್ಲಿ ರತಕ್ಕ ಭೋಧನಾ ಸಿಬ್ಬಂದಿಯನ್ನು ಭರ್ತಿ ಮಾಡುವುದರ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 138(220)

ಶ್ರೀ ಆರ್. ದಯಾನಂದರಾವ್(ಗಾಂಧಿನಗರ)

ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ಮಹಾನಗರ ಪಾಲಿಕೆಯ ಶಾಲೆಗಳಲ್ಲಿ ಖಾಲಿ ಇರುವ ಭೋಧನಾ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಅವುಗಳನ್ನು ಭರ್ತಿ ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಚೌಡರೆಡ್ಡಿ

(ನಗರಾಭಿವೃದ್ಧಿ ಸಚಿವರು)

122 (ನೂರ ಇಪ್ಪತ್ತೆರಡು)

ಬೆಂಗಳೂರು ಮಹಾನಗರ ಪಾಲಿಕೆಗೆ ನಿವೃತ್ತಿ, ಮರಣ ಮತ್ತು ರಾಜೀನಾಮೆಗಳಿಂದ ತೆರವಾದ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದೆ.

ವಿಷಯ:- ಬೆಂಗಳೂರು ನಗರದಲ್ಲಿ ಹಳೇ ನೀರಿನ ಪೈಪುಗಳನ್ನು ಬದಲಾಯಿಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 139(147)

ಶ್ರೀ ಆರ್.ವಿ.ದೇವರಾಜ್(ಚಾಮರಾಜಪೇಟೆ)

ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ಬೆಂಗಳೂರು ನಗರದಲ್ಲಿ ಅದರಲ್ಲೂ ಸಿಟಿ ಮತ್ತು ಚಾಮರಾಜಪೇಟೆ ಭಾಗಗಳಲ್ಲಿ ಹಳೆಯ ನೀರಿನ ಪೈಪುಗಳು ತುಕ್ಕು ಹಿಡಿದು ಸೋರುತ್ತಿರುವುದರಿಂದ ಅವುಗಳನ್ನು ಬದಲಾಯಿಸಲು ಬೆಂಗಳೂರು ಜಲಮಂಡಳಿಯವರು ಯಾವುದಾದರೂ ಕಾರ್ಯಕ್ರಮ ರೂಪಿಸಿಕೊಂಡಿದ್ದಾರೆಯೇ

2. ಆದಕ್ಕೆ ಎಷ್ಟು ಹಣ ಅಂದಾಜು ಮಾಡಲಾಗಿದೆ.

3. ಸರ್ಕಾರದವರು ಇದಕ್ಕಾಗಿ ಕೇಂದ್ರ ಸರ್ಕಾರದಿಂದ ಅಥವಾ ಹುಡ್ಕೋದಿಂದ ಹಣ ಸಹಾಯ ಕೇಳಿರುವರೇ.

4. 1993-94ರಲ್ಲಿ ಅದಕ್ಕಾಗಿ ಸರ್ಕಾರದಿಂದ ಎಷ್ಟು ಹಣ ಖರ್ಚು ಮಾಡಲು ಉದ್ದೇಶಿಸಲಾಗಿದೆ.

ಶ್ರೀ ಚೌಡರೆಡ್ಡಿ

(ನಗರಾಭಿವೃದ್ಧಿ ಸಚಿವರು)

ಹೌದು, ರೂಪಿಸಿಕೊಂಡಿದ್ದಾರೆ ಮತ್ತು ಈಗಾಗಲೇ 14.05 ಲಕ್ಷ ರೂಗಳ ವೆಚ್ಚದಲ್ಲಿ 3930 ಮೀಟರ್‌ಗಳಷ್ಟು ಉದ್ದ ಕೊಳವೆಗಳನ್ನು ನಗರದ ಸಿಟಿ ಭಾಗಗಳಲ್ಲಿ ಬದಲಾಯಿಸಲಾಗಿದೆ.

ರೂ. 10.00 ಕೋಟಿಗಳು.